ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 29–01–2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಹುತಾತ್ಮರ ಸ್ಮರಣಾರ್ಥ ಮೌನ ಆಚರಣೆ: | 30–1–2016<br>ಶನಿವಾರ<br>ಬೆಳಗ್ಗೆ<br>10–30 ಗಂಟೆಗೆ<br>ಭಜನೆ<br><br>11–00 ಗಂಟೆಗೆ<br>ಮೌನ ಆಚರಣೆ | ವಿಧಾನ ಸೌಧ ಮತ್ತು ವಿಕಾಸ ಸೌಧ ಕಟ್ಟಡಗಳ ಮಧ್ಯದಲ್ಲಿರುವ ಮಹಾತ್ಮಾಗಾಂಧಿ ಪ್ರತಿಮೆ ಬಳಿ ಬೆಂಗಳೂರು |
| 2 | ಕಾರ್ಮಿಕ ಇಲಾಖೆ ತರಬೇತಿ ಕಾರ್ಯಕ್ರಮ:<br>ಉದ್ಘಾಟನೆ:<br><br>ಡಾ: ಪಿ.ಎಸ್. ವಿಶ್ವನಾಥ್,<br>ಕಾರ್ಮಿಕ ಆಯುಕ್ತರು, | 30–1–2016<br>ಶನಿವಾರ<br>ಬೆಳಗ್ಗೆ<br>10–30 ಗಂಟೆಗೆ | ಮೆ: ಸ್ಯಾನ್ ಐ ಟಿ ಸಲ್ಯೂಷನ್ಸ್ ಪ್ರೈ ಲಿ. ಸಿ.ಎಂ. ಟವರ್, 76/3 , 30 ನೇ ಕ್ರಾಸ್, ತಿಲಕನಗರ ಮುಖ್ಯ ರಸ್ತೆ, ಜಯನಗರ, ಬೆಂಗಳೂರು –560 011 |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

**WARM WELCOME TO REPUBLIC DAY CAMP CONTINGENT OF NCC CADETS OF KARNATAKA AND GOA AT BENGALURU CANTT RAILWAY STATION ON 31 JAN 2016 BY KARNATAKA EXP.**

**Bengaluru, Jan 29 (Karnataka Information)**

A total of 106 NCC cadets comprising of both girls and boys and four NCC Officers who participated in the Republic Day Camp at Delhi held from 01 Jan to 28 Jan 2016 arrived by **Karnataka Express** in the afternoon on **31 Jan 16 at 1330 hrs**. They were given a warm welcome at Bangalore Cant Railway Station by **Air Commodore C Rajeev Deputy** Director General (DDG) Karnataka and Goa Dte. During the interaction with the cadets, it emerged that inspite of cold weather conditions in Delhi, the cadets participated with great enthusiasm and vigour during the camp. They proved their worth that nothing can deter their will power and determination in achieving excellence in various competitions. It is matter of pride that the NCC Directorate (Kar & Goa) bagged the overall **Runners Up position** at the **National level**, for the **Prime Minister's Banner**.

**babu:km**

**BAKING COURSE**

**Bengaluru, Jan 29 (Karnataka Information)**

**The bakery Training unit, Hebbal, Bengaluru is conducting 4 weeks training course on bakery Technology for the benefit of Housewives and Entrepreneurs from 1st Feb 2016. Bakery products like special Biscuits, Bread Rolls, Puffs Cakes and fancy items will be taught during the course. Participants will be allowed to learn by preparing the products by themselves. The interested persons can contact Coordinator in person or through telephone no 23513370 during office hours.**

**babu:gpr**

**ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ತರಬೇತಿ**

ಬೆಂಗಳೂರು, ಜನವರಿ 29 (ಕರ್ನಾಟಕ ವಾರ್ತೆ)

ಕಾರ್ಮಿಕ ಇಲಾಖೆಯ ಅಧಿಕಾರಿಗಳು ಮತ್ತು ಹಿರಿಯ ಕಾರ್ಮಿಕ ನಿರೀಕ್ಷಕರು, ಕಾರ್ಮಿಕ ನಿರೀಕ್ಷಕರುಗಳಿಗೆ ನವೀಕೃತ ಅಂತರ್ಜಾಲ ತಾಣ (ವೆಬ್‌ಸೈಟ್)ದ ಬಗ್ಗೆ ಪರಿಚಯ ಹಾಗೂ ನೂತನ ವೆಬ್‌ಪೋರ್ಟಲ್ (ಕಾರ್ಮಿಕ ಇಲಾಖೆ ಸಹಯೋಗ) ಮತ್ತು ಕರ್ನಾಟಕ ವಾಣಿಜ್ಯ ವಾಹನ ಚಾಲಕರ ಅಪಘಾತ ಪರಿಹಾರ ಯೋಜನೆಯಡಿ ನೋಂದಣಿ ತಂತ್ರಾಂಶದ ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಕರ್ನಾಟಕ ಕಾರ್ಮಿಕ ಅಧ್ಯಯನ ಸಂಸ್ಥೆವತಿಯಿಂದ ದಿನಾಂಕ 30-01-2016 ರಂದು ಬೆಳಿಗ್ಗೆ 10.30 ಗಂಟೆಗೆ ಮೆ: ಸ್ಯಾನ್ ಐಟಿ ಸಲ್ಯೂಷನ್ಸ್ ಪ್ರೈ. ಲಿ, ಸಿ.ಎಂ. ಟವರ್ 76/3, 30ನೇ ಕ್ರಾಸ್, ತಿಲಕ ನಗರ ಮುಖ್ಯರಸ್ತೆ, ಜಯನಗರ, ಬೆಂಗಳೂರು – 11 ಇಲ್ಲಿ ಏರ್ಪಡಿಸಲಾಗಿದೆ.

ಪ್ರಸ್ತುತ ತರಬೇತಿಯಲ್ಲಿ ಇಲಾಖೆಯ ಅಧಿಕಾರಿಗಳಿಗೆ ಪೋರ್ಟಲ್ ಹಾಗೂ ವೆಬ್‌ಸೈಟ್‌ಗಳು ಇಲಾಖೆಯ ಧ್ಯೇಯೋದ್ದೇಶಗಳು, ಇಲಾಖೆಯ ಅಧೀನದಲ್ಲಿರುವ ಮಂಡಳಿಗಳು ಹಾಗೂ ಮಂಡಳಿಗಳ ವತಿಯಿಂದ ಕಾರ್ಮಿಕರಿಗಾಗಿ ಜಾರಿಗೆ ತಂದಿರುವ ಜನಪ್ರಿಯ ಯೋಜನೆಗಳು, ಕಾರ್ಮಿಕ ಕಾಯ್ದೆ ಹಾಗೂ ನಿಯಮಗಳು, ದೂರು ನಿವಾರಣಾ ಕ್ರಮಗಳ ಬಗ್ಗೆ ತರಬೇತಿ ನೀಡಲಾಗುವುದು.

ಬಾಬು:ಜಿಪಿಆರ್.

# ನವದೆಹಲಿಯ ಗಣರಾಜ್ಯೋತ್ಸವ ಪೆರೇಡ್‌ನಲ್ಲಿ ಪ್ರಶಸ್ತಿ ವಿಜೇತ ರಾಜ್ಯದ ಎನ್.ಸಿ.ಸಿ. ತಂಡ ಜ. 31 ರಂದು ನಗರಕ್ಕೆ

**ಬೆಂಗಳೂರು, ಜನವರಿ 29 (ಕರ್ನಾಟಕ ವಾರ್ತೆ)**

ನವದೆಹಲಿಯಲ್ಲಿ ಜನವರಿ 1 ರಿಂದ 28 ರವರೆಗೆ ನಡೆದ ಗಣರಾಜ್ಯೋತ್ಸವ ಎನ್.ಸಿ.ಸಿ. ಶಿಬಿರದಲ್ಲಿ ಪಾಲ್ಗೊಂಡು, ನವದೆಹಲಿಯ ಜನವರಿ 26 ರ ಗಣರಾಜ್ಯೋತ್ಸವ ಪೆರೇಡ್‌ನಲ್ಲಿ ಭಾಗವಹಿಸಿ ರಾಷ್ಟ್ರೀಯ ಮಟ್ಟದ ಪ್ರಧಾನ ಮಂತ್ರಿಗಳ ರನ್ನರ್ಸ್ ಆಪ್ (ಎರಡನೇ ಸ್ಥಾನ) ಪದಕ ಪಡೆದ ಕರ್ನಾಟಕ ರಾಜ್ಯ ಮತ್ತು ಗೋವಾ ಎನ್.ಸಿ.ಸಿ. ಮಹಿಳಾ ಮತ್ತು ಪುರುಷ ತಂಡಗಳು ಜನವರಿ 31 ರಂದು ಮಧ್ಯಾಹ್ನ 1.30 ಗಂಟೆಗೆ ಕರ್ನಾಟಕ ಎಕ್ಸ್‌ಪ್ರೆಸ್ ರೈಲಿನಲ್ಲಿ ಬೆಂಗಳೂರಿನ ಕಂಟೋನ್‌ಮೆಂಟ್ ರೈಲ್ವೆ ನಿಲ್ದಾಣಕ್ಕೆ ಆಗಮಿಸಲಿದೆ.

ಈ ತಂಡವನ್ನು ಕರ್ನಾಟಕ ಮತ್ತು ಗೋವಾ ಎನ್.ಸಿ.ಸಿ. ಮುಖ್ಯಸ್ಥ ಹಾಗೂ ಡೆಪ್ಯುಟಿ ಡೈರೆಕ್ಟರ್ ಜನರಲ್ ಏರ್ ಕಮಾಡೋರ್ ಸಿ ರಾಜೀವ್ ಸ್ವಾಗತಿಸಿ, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವರು. ಪ್ರಶಸ್ತಿ ವಿಜೇತ ತಂಡವನ್ನು ಸ್ವಾಗತಿಸಲು ಸಾರ್ವಜನಿಕರು, ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಲು ಕೋರಿದೆ.

ಅಲ್ಲದೆ, ಪ್ರಶಸ್ತಿ ವಿಜೇತ ಎನ್.ಸಿ.ಸಿ. ತಂಡವು ಫೆಬ್ರವರಿ 3 ರಂದು ಸಂಜೆ 6-00 ಗಂಟೆಗೆ ಬೆಂಗಳೂರು ವಿಧಾನಸೌಧದಲ್ಲಿ ರಾಜ್ಯದ ಮುಖ್ಯಮಂತ್ರಿಗಳನ್ನು ಭೇಟಿಮಾಡಲಿದೆ. ಫೆಬ್ರವರಿ 4 ರಂದು ಸಂಜೆ 6-00 ಗಂಟೆಗೆ ಬೆಂಗಳೂರಿನ ಮೌಂಟ್ ಕಾರ್ಮೆಲ್ ಕಾಲೇಜಿನ ಸಭಾಂಗಣದಲ್ಲಿ ಕರ್ನಾಟಕ ಮತ್ತು ಗೋವಾ ಎನ್.ಸಿ.ಸಿ. ಹಾಗೂ ಡೆಪ್ಯುಟಿ ಡೈರೆಕ್ಟರ್ ಜನರಲ್ ಏರ್ ಕಮಾಡೋರ್‌ನಿಂದ ಪ್ರಶಸ್ತಿ ವಿಜೇತ ಎನ್.ಸಿ.ಸಿ. ತಂಡಕ್ಕೆ ಸನ್ಮಾನವನ್ನು ಏರ್ಪಡಿಸಲಾಗಿದೆ ಎಂದು ಕರ್ನಾಟಕ ಮತ್ತು ಗೋವಾ ಎನ್‌ಸಿಸಿ ಕಛೇರಿ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್

# **ಬೇಕರಿ ತರಬೇತಿ**

**ಬೆಂಗಳೂರು, ಜನವರಿ 29 (ಕರ್ನಾಟಕ ವಾರ್ತೆ)**

**ಬೇಕರಿ ತರಬೇತಿ ಘಟಕದ ವತಿಯಿಂದ 4 ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿದಾರರಿಗೆ ಉದ್ದಿಮೆ ಮತ್ತು ಗೃಹಿಣಿಯರಿಗಾಗಿ ಆಯೋಜಿಸಲಾಗಿದೆ. ತರಬೇತಿಯು ದಿನಾಂಕ : 01–02–2016 ರಿಂದ ಪ್ರಾರಂಭವಾಗಲಿದೆ. ಈ ತರಬೇತಿಯಲ್ಲಿ ಬ್ರೆಡ್, ಬನ್, ಪಫ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳ ತಯಾರಿಕೆ ಕಲಿಸಲಾಗುವುದು. ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ. ಯಾವುದೇ ವಿದ್ಯಾರ್ಹತೆ ಅವಶ್ಯಕತೆಯಿಲ್ಲ. ತಯಾರಿಕೆಗೆ ಬೇಕಾದ ಕಚ್ಚಾ ಪದಾರ್ಥಗಳನ್ನು ತರಬೇತಿ ಘಟಕದಲ್ಲೇ ಒದಗಿಸಲಾಗುವುದು. ಹೆಚ್ಚಿನ ವಿವರಗಳಿಗೆ ಸಂಯೋಜನಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು–560 024, ಇವರನ್ನು ಖುದ್ದಾಗಿ ಅಥಾವ ದೂರವಾಣಿ ಸಂಖ್ಯೆ 23513370 ಮೂಲಕ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಲು ಕೋರಲಾಗಿದೆ.**

ಬಾಬು:ಜಿಪಿಆರ್.

# **ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ**

**ಬೆಂಗಳೂರು, ಜನವರಿ 29 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 31–01–2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಎಸ್.ಪಿ.ಚಂದ್ರಶೇಖರಮೂರ್ತಿ ಮತ್ತು ತಂಡ, ಬೆಂಗಳೂರು ರವರಿಂದ ಜನಪದ ಗೀತೆ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಬಲಭೀಮ ನೆಲೋಗಿ ಮತ್ತು ತಂಡ, ಕಲಬುರಗಿ ರವರಿಂದ ಜನಪದ ಗೀತೆ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ–ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀಮತಿ ಭಾವನ ವೆಂಕಟೇಶ್ವರ ಮತ್ತು ತಂಡದವರಿಂದ ಭರತನಾಟ್ಯ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 08.00 ಗಂಟೆಯಿಂದ 09.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ವಿದೂಷಿ ಶ್ರೀಮತಿ ಗೀತ ಶ್ರೀನಾಥ್ ರವರಿಂದ ನವ್ಯ ನಾಟ್ಯ ಸಂಗಮ ದಶಾವತಾರ ನೃತ್ಯ ರೂಪಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ ಶ್ರೀ ಡಿ.ಎಲ್.ನರಸಿಂಹಚಾರ್ ರವರ ಸಂಶೋಧನ ಪರಿಚಯ ಕುರಿತು ಉಪನ್ಯಾಸ ಕಾರ್ಯಕ್ರಮ ಹಾಗೂ ಇಂಚರ ಶ್ರೀ ಕಲಾತಂಡದವರಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ಬೆಳಿಗ್ಗೆ 6.00 ರಿಂದ ಸಂಜೆ 6.00 ಘಂಟೆಯವರೆಗೆ ಭಾರತೀಯ ಅಂಚೆ ಇಲಾಖೆ ಮತ್ತು ಬತ್ತೀಸ್ ಸಂಸ್ಥೆರವರ ಸಹಯೋಗದೊಂದಿಗೆ ಸ್ಥಳದಲ್ಲೇ ಸಾರ್ವಜನಿಕರು ತಮ್ಮ ಪ್ರೀತಿ ಪಾತ್ರರಿಗೆ "ಪತ್ರ ಹಾಗೂ ಅಂಚೆ ಪತ್ರ"ವನ್ನು ಬರೆಯುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಹಸಿರು ದಳ ಸಂಸ್ಥೆಯ ವತಿಯಿಂದ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಹಾಗೂ ಪರಿಸರ ಸ್ನೇಹಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.**

- ಬೆಳಿಗ್ಗೆ 6.00 ರಿಂದ ಸಂಜೆ 6.00 ಘಂಟೆಯವರೆಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ ರವರ ವತಿಯಿಂದ ಎನರ್ಜಿ ಎಫಿಶಿಯೆನ್ಸಿ ಸರ್ವಿಸಸ್ ಲಿಮಿಟೆಡ್ (EESL) ರವರ ಸಹಯೋಗದೊಂದಿಗೆ ಡೆಲ್ಪ್ (DELP) ಕಾರ್ಯಕ್ರಮದ ಮುಖಾಂತರ ನಾಡಿನ ಜನತೆಗೆ ಪ್ರತಿ ಬಲ್ಬ್ ಗೆ ರೂ.100 ರಂತೆ 9 ವ್ಯಾಟ್ LED ಬಲ್ಬ್ ಗಳನ್ನು ವಿತರಿಸಲಾಗುತ್ತಿದ್ದು, 2 ಕಿ.ವ್ಯಾ. ವರೆಗೆ ಗರಿಷ್ಠ 5 ಬಲ್ಬ್ ಗಳನ್ನು ಹಾಗೂ 2.ಕಿ.ವ್ಯಾ. ಗಿಂತ ಹೆಚ್ಚು ಇದ್ದರೆ ಗರಿಷ್ಠ 10 ಬಲ್ಬ್ ಗಳನ್ನು ವಿತರಿಸಲಾಗುವುದು. ಸಾರ್ವಜನಿಕರು ಇತ್ತೀಚಿನ ವಿದ್ಯುತ್ ಬಿಲ್ ಪ್ರತಿ, ವಿಳಾಸದ ಚೀಟಿ ಹಾಗೂ ಗುರುತಿನ ಚೀಟಿಯೊಂದಿಗೆ ಪೂರ್ಣ ಮುಂಗಡ ಪಾವತಿ ಮಾಡಿ ಬಲ್ಪ್ ಗಳನ್ನು ಪಡೆಯಬಹುದಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯ ವತಿಯಿಂದ ಬುದ್ಧಿ ವಿಕಲ ಚೇತನ ಮಕ್ಕಳಿಂದ ವಿವಿಧ ಬಗೆಯ ವೇಷಭೂಷಣದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.